ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 19/09/2019

# ಡಿಕೆಶಿಗೆ ಜಾಮೀನು ಇನ್ನೂ ಅಸ್ಪಷ್ಟ

19-9-19

**ಸಂ.ಕ ಸಮಾಚಾರ ಬೆಂಗಳೂರು**



ಮಾಜಿ ಸಚಿವ ಡಿಕೆ ಶಿವಕುಮಾರ್ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯವು ಗುರುವಾರಕ್ಕೆ ಮುಂದೂಡಿದೆ.

ಗುರುವಾರ ಮಧ್ಯಾಹ್ನ 3 ಗಂಟೆಗೆ ವಿಚಾರಣೆ ಆರಂಭವಾಗಲಿದೆ. ತದನಂತರದ ಬೆಳವಣಿಗೆಗಳನ್ನು ಕಾದು ನೋಡಬೇಕಿದೆ.

ಇಡಿ ವಶದಲ್ಲಿದ್ದ ಡಿಕೆ ಶಿವಕುಮಾರ್ ಅವರನ್ನು ನ್ಯಾಯಾಲಯವು ಮಂಗಳವಾರ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿತ್ತು. ಆದರೆ, ಅನಾರೋಗ್ಯದ ಹಿನ್ನೆಲೆಯಲ್ಲಿ ಚಿಕಿತ್ಸೆ ಕೊಡಿಸುವಂತೆ ನ್ಯಾಯಾಲಯವು ಸೂಚಿಸಿದ ಕಾರಣ ಅವರನ್ನು ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ.

**ವಕೀಲರು ಗೈರು:** ಇಡಿ ಪರ ವಾದ ಮಂಡಿಸಬೇಕಿದ್ದ ಕೆಎಂ ನಟರಾಜ್ ಜಾಮೀನು ಅರ್ಜಿ ವಿಚಾರಣೆ ವೇಳೆ ಗೈರು ಹಾಜರಾಗಿದ್ದರು. ನ್ಯಾ. ಅಜಯ್‌ಕುಮಾರ್ ಅವರಿದ್ದ ನ್ಯಾಯಪೀಠವು ವಿಚಾರಣೆಯನ್ನು ಪೂರ್ಣಗೊಳಿಸುತ್ತಿದ್ದಂತೆಯೇ ಸ್ಥಳಕ್ಕೆ ಆಗಮಿಸಿದ ಕೆಎಂ ನಟರಾಜ್ ತದನಂತರ ಇಡಿ ಅಧಿಕಾರಿಗಳ ಜೊತೆಗೆ ತೆರಳಿದರು.

7